# ಕರ್ನಾಟಕ ವಿಧಾನ ಪರಿಷತ್ತು

| | |
|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | 1203 (1468) |
| ಸದಸ್ಯರ ಹೆಸರು | ಶ್ರೀ ಕವಟಗಿಮಠ ಮಹಾಂತೇಶ ಮಲ್ಲಿಕಾರ್ಜುನ |
| ಉತ್ತರಿಸುವ ದಿನಾಂಕ | 17-03-2021 |
| ಉತ್ತರಿಸುವವರು | ಹಿಂದೂ ಧಾರ್ಮಿಕ ಮತ್ತು ಧರ್ಮಾದಾಯ ದತ್ತಿ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು |

| | ಪ್ರಶ್ನೆ | ಉತ್ತರ |
|---|---|---|
| ಅ) | ರಾಜ್ಯದ ಮುಜರಾಯಿ ದೇವಸ್ಥಾನದಡಿ ಯಾತ್ರಾರ್ಥಿಗಳು ಉಳಿದುಕೊಳ್ಳಲು ಭವನಗಳನ್ನು ನಿರ್ಮಿಸುವ ಉದ್ದೇಶ ಸರ್ಕಾರಕ್ಕಿದೆಯೇ? | ಹೌದು, ರಾಜ್ಯದ ಧಾರ್ಮಿಕ ದತ್ತಿ ಇಲಾಖಾ ವ್ಯಾಪ್ತಿಯಲ್ಲಿನ ಪ್ರಮುಖ ದೇವಾಲಯಗಳಲ್ಲಿ ಯಾತ್ರಾರ್ಥಿಗಳ ವಾಸ್ತವ್ಯಕ್ಕಾಗಿ ಭವನಗಳನ್ನು ನಿರ್ಮಿಸುವ ಉದ್ದೇಶ ಸರ್ಕಾರಕ್ಕಿರುತ್ತದೆ. |
| ಆ) | ಬೆಳಗಾವಿ ಜಿಲ್ಲೆಯ ಸವದತ್ತಿ ಯಲ್ಲಮ್ಮ, ಮಾಯಕ್ಕ ಚಿಂಚಲಿ, ಉತ್ತರ ಕನ್ನಡ ಜಿಲ್ಲೆಯ ಉಳವಿ ಚೆನ್ನಬಸವೇಶ್ವರ ಕ್ಷೇತ್ರಗಳಲ್ಲಿ ಯಾತ್ರಾರ್ಥಿಗಳ ವಾಸ್ತವ್ಯಕ್ಕಾಗಿ ಕರ್ನಾಟಕ ಭವನಗಳನ್ನು ನಿರ್ಮಿಸಲು ಸರ್ಕಾರ ಯೋಜನೆ ಹಮ್ಮಿಕೊಂಡಿದೆಯೇ? | ಬೆಳಗಾವಿ ಜಿಲ್ಲೆ, ಸವದತ್ತಿ ತಾಲ್ಲೂಕು, ಶ್ರೀ ಕ್ಷೇತ್ರ ಯಲ್ಲಮ್ಮನ ಗುಡ್ಡಕ್ಕೆ ಆಗಮಿಸುವ ಲಕ್ಷಾಂತರ ಭಕ್ತರಿಗೆ ಉಳಿದುಕೊಳ್ಳಲು ಈಗಾಗಲೇ ವಸತಿ ವ್ಯವಸ್ಥೆಯನ್ನು ಕಲ್ಪಿಸಿಕೊಡಲಾಗಿದ್ದು, ಅವುಗಳ ವಿವರ ಈ ಕೆಳಗಿನಂತಿದೆ. |

| ಕ್ರ.ಸಂ | ವಿವರ |
|---|---|
| 1 | 56 ಕೊಠಡಿಗಳುಳ್ಳ ಹಾಗೂ 06 ಡಾರ್ಮೆಟರಿಗಳು ಇರುವ ವಸತಿ ಸಂಕೀರ್ಣ ಕಟ್ಟಡ. |
| 2 | 61 ಕೊಠಡಿಗಳುಳ್ಳ ಯಾತ್ರಿ ನಿವಾಸ ಕಟ್ಟಡ |
| 3 | 246 ಕೊಠಡಿಗಳುಳ್ಳ ಅತಿಥಿ ಗೃಹ ಕಟ್ಟಡವನ್ನು ನಿರ್ಮಿಸಲಾಗುತ್ತಿದ್ದು, ಸದರಿ ಕಟ್ಟಡ ನಿರ್ಮಾಣ ಕಾಮಗಾರಿಯು ಮುಕ್ತಾಯ ಹಂತದಲ್ಲಿದೆ. |
| 4 | 50 ಜನ ಉಳಿಯುವ 08 ತಂಗುದಾಣ ಕಟ್ಟಡಗಳ ನಿರ್ಮಾಣ ಕಾಮಗಾರಿಯು ಪ್ರಗತಿಯಲ್ಲಿದೆ. |
| 5 | 25 ಜನ ಉಳಿಯುವ 08 ತಂಗುದಾಣ ಕಟ್ಟಡಗಳ ನಿರ್ಮಾಣ ಕಾಮಗಾರಿಯು ಪ್ರಗತಿಯಲ್ಲಿದೆ. |

ಸದರಿ ದೇವಾಲಯದಲ್ಲಿ ಕರ್ನಾಟಕ ರಾಜ್ಯ ಪ್ರವಾಸೋದ್ಯಮ ಇಲಾಖೆಯ ಅನುದಾನದಲ್ಲಿ ನಿರ್ಮಿಸಲಾಗುತ್ತಿರುವ ವಸತಿ ಗೃಹಗಳ ನಿರ್ಮಾಣ ಕಾಮಗಾರಿಗಳ ವಿವರ ಈ ಕೆಳಗಿನಂತಿವೆ.

| ಕ್ರ.ಸಂ | ವಿವರ |
|---|---|
| 1 | 115 ಜನತಂಗುವ 24 ಕೊಠಡಿಗಳು ಕಟ್ಟಡದ ನಿರ್ಮಾಣ ಕಾಮಗಾರಿಯು ಪ್ರಾರಂಭ ಹಂತದಲ್ಲಿದೆ. |
| 2 | 40 ಜನ ತಂಗುವ 18 ಕೊಠಡಿಗಳುಳ್ಳ ಕಟ್ಟಡ ನಿರ್ಮಾಣ ಕಾಮಗಾರಿಯು ಪ್ರಾರಂಭ ಹಂತಲದಲ್ಲಿದೆ |

| | | |
|---|---|---|
| | | ಬೆಳಗಾವಿ ಜಿಲ್ಲೆ, ರಾಯಭಾಗ ತಾಲ್ಲೂಕು, ಚಿಂಚಲಿ ಗ್ರಾಮದ ಶ್ರೀ ಮಾಯಕ್ಕಾ ದೇವಸ್ಥಾನಕ್ಕೆ ದೇವಾಲಯದ ನಿಧಿಯಿಂದ ಯಾತ್ರಿ ನಿವಾಸ ಸೌಕರ್ಯ ಕಲ್ಪಿಸಲಾಗಿದೆ.<br><br>ಉತ್ತರ ಕನ್ನಡ ಜಿಲ್ಲೆಯ ಉಳವಿ ಚೆನ್ನಬಸವೇಶ್ವರ ದೇವಾಲಯವು ಖಾಸಗಿ ಧಾರ್ಮಿಕ ಸಂಸ್ಥೆಯಾಗಿದ್ದು, ಇಲ್ಲಿಗೆ ಬರುವ ಯಾತ್ರಾರ್ಥಿಗಳಿಗೆ ಸದರಿ ಸಂಸ್ಥೆಯವರು ಮೂಲಭೂತ ಸೌಕರ್ಯ/ವಸತಿ ಸೌಕರ್ಯವನ್ನು ಕಲ್ಪಿಸಬೇಕಾಗಿರುತ್ತದೆ. ವಿಶೇಷ ಜಾತ್ರೆಯ ಸಮಯದಲ್ಲಿ ದೇವಾಲಯದ ಆಡಳಿತ ಮಂಡಳಿ ಮತ್ತು ಭಕ್ತಾಧಿಗಳ ಹಿತದೃಷ್ಟಿಯಿಂದ ಸರ್ಕಾರ ಮತ್ತು ಸ್ಥಳೀಯ ಸಂಸ್ಥೆಗಳ ವತಿಯಿಂದ ಅಗತ್ಯವಾದ ಮೂಲಭೂತ ಸೌಕರ್ಯ, ಪ್ರಯಾಣಿಕರಿಗೆ ವಿಶೇಷ ಸಾರಿಗೆ ವ್ಯವಸ್ಥೆ ಮತ್ತು ಭದ್ರತಾ ವ್ಯವಸ್ಥೆಗಳನ್ನು ಒದಗಿಸಲಾಗುತ್ತದೆ |
| | ನೆರೆ ರಾಜ್ಯದ ಜಿಲ್ಲೆಯಾದ ಸಾಂಗ್ಲಿಯ ಗುಡ್ಡಾಪೂರ, ದಾನಮ್ಮ ದೇವಿ, ಶ್ರೀ ಶೈಲದಲ್ಲಿರುವ ಮಲ್ಲಿಕಾರ್ಜುನ ದೇವಾಲಯ ಆಂಧ್ರ ಪ್ರದೇಶದ ರಾಯಚೋಟಿ ವೀರಭದ್ರ ದೇವಸ್ಥಾನಗಳಲ್ಲಿ ಅಸಂಖ್ಯಾತ ಕರ್ನಾಟಕದ ಯಾತ್ರಾರ್ಥಿಗಳಿಗೆ ವಾಸ್ತವ್ಯಕ್ಕೆ ಅನಾನುಕೂಲತೆಯಾಗುತ್ತಿದ್ದು, ಇಂತಹ ಕಡೆಗಳಲ್ಲಿ ಕರ್ನಾಟಕ ಭವನ ನಿರ್ಮಿಸುವ ಕುರಿತು ಸರ್ಕಾರ ಕೈಗೊಂಡ ಕ್ರಮಗಳೇನು? | ನೆರೆ ರಾಜ್ಯವಾದ ಆಂಧ್ರಪ್ರದೇಶದ ಶ್ರೀಶೈಲಂನಲ್ಲಿರುವ ಶ್ರೀ ಭ್ರಮರಾಂಭ ಮಲ್ಲಿಕಾರ್ಜುನ ಸ್ವಾಮಿ ದೇವಾಲಯದ ಹತ್ತಿರ 16 ಸಾಮಾನ್ಯ ಕೊಠಡಿಗಳು ಮತ್ತು 8 ಹವಾನಿಯಂತ್ರಣ ಕೊಠಡಿಗಳು ಸೇರಿ ಒಟ್ಟು 24 ಕೊಠಡಿಗಳನ್ನೊಳಗೊಂಡಂತೆ ಕರ್ನಾಟಕ ರಾಜ್ಯ ಛತ್ರ/ ಭವನವಿದ್ದು, ಭಕ್ತಾಧಿಗಳ ವಾಸ್ತವ್ಯಕ್ಕೆ ನೀಡಲಾಗುತ್ತಿದೆ.<br><br>ಮಹಾರಾಷ್ಟ್ರ ರಾಜ್ಯದ ಸಾಂಗ್ಲಿ ಜಿಲ್ಲೆಯ ಜತ್ ತಾಲ್ಲೂಕಿನ ಗುಡ್ಡಾಪುರದಲ್ಲಿರುವ ಶ್ರೀ ದಾನಮ್ಮ ದೇವಿ ದೇವಾಲಯದ ಬಳಿ ಕರ್ನಾಟಕ ರಾಜ್ಯಕ್ಕೆ ಸೇರಿದ 0.79ಸೆಂಟ್ಸ್ ಸ್ಥಳವಿದ್ದು, ಸದರಿ ಸ್ಥಳದಲ್ಲಿ ಕರ್ನಾಟಕ ರಾಜ್ಯ ಛತ್ರ/ಭವನವನ್ನು ನಿರ್ಮಿಸಲು ಪರಿಷ್ಕೃತ ಅಂದಾಜು ಪಟ್ಟಿಯನ್ನು ಸಲ್ಲಿಸುವಂತೆ ಸಹಾಯಕ ಆಯುಕ್ತರು ಧಾರ್ಮಿಕ ದತ್ತಿ ಇಲಾಖೆ, ಬೆಳಗಾವಿ ಜಿಲ್ಲೆ ರವರನ್ನು ಕೋರಲಾಗಿದ್ದು, ಪ್ರಸ್ತಾವನೆಯನ್ನು ನಿರೀಕ್ಷಿಸಲಾಗುತ್ತಿದೆ.<br><br>ಆಂಧ್ರಪ್ರದೇಶದ ರಾಯಚೋಟಿ ಶ್ರೀ ವೀರಭದ್ರ ದೇವಸ್ಥಾನದ ಬಳಿ ಕರ್ನಾಟಕ ರಾಜ್ಯ ಸರ್ಕಾರವು ಸ್ಥಳ ಹೊಂದಿರುವುದಿಲ್ಲ. ಕರ್ನಾಟಕ ಭವನ ನಿರ್ಮಾಣದ ಕುರಿತು ಪ್ರಸ್ತಾವನೆ ಸ್ವೀಕೃತವಾಗಿರುವುದಿಲ್ಲ. |

ಸಂಖ್ಯೆ: ಕಂಇ 71 ಮುಸಪ್ರ 2021

**(ಕೋಟಾ ಶ್ರೀನಿವಾಸ ಪೂಜಾರಿ)**
ಹಿಂದೂ ಧಾರ್ಮಿಕ ಮತ್ತು ಧರ್ಮಾದಾಯ ದತ್ತಿ
ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು.